# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** **ಅಲ್ಪಸಂಖ್ಯಾತರ ಹೆಚ್ಚಾಗಿ ವಾಸಿಸುವ ಪ್ರದೇಶಗಳಲ್ಲಿ ಮೂಲಭೂತ ಸೌಕರ್ಯವನ್ನು ಒದಗಿಸಲು (ಅಲ್ಪಸಂಖ್ಯಾತರ ಕಾಲೋನಿಗಳ ಅಭಿವೃದ್ಧಿ) ಅನುದಾನ ಬಿಡುಗಡೆ ಮಾಡುವ ಬಗ್ಗೆ**

**ಓದಲಾಗಿದೆ:** 1) ಸರ್ಕಾರದ ಆದೇಶ ಸಂಖ್ಯೆ: ಎಂಡಬ್ಲ್ಯೂಡಿ 151 ಎಂಡಿಎಸ್ 2016, ದಿನಾಂಕ: 04.07.2017.

2) 2017-18ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ: 222

3) ಸರ್ಕಾರದ ಆದೇಶ ಸಂಖ್ಯೆ: ಎಂಡಬ್ಲ್ಯೂಡಿ 169 ಎಂಡಿಎಸ್ 2017, ದಿನಾಂಕ: 06.04.2017.

4) ಸರ್ಕಾರದ ಆದೇಶ ಸಂಖ್ಯೆ: ಎಂಡಬ್ಲ್ಯೂಡಿ 51 ಎಂಡಿಎಸ್ 2017 (ಭಾ-1), ದಿನಾಂಕ: 01.03.2017.

5) ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯ ಇವರ ಪ್ರಸ್ತಾವನೆ ಸಿಆರ್:177/2016-17, ದಿನಾಂಕ: 31.03.2017

6) ಸರ್ಕಾರದ ಆದೇಶ ಸಂಖ್ಯೆ: ಎಂಡಬ್ಲ್ಯೂಡಿ 192 ಎಂಡಿಎಸ್ 2017, ದಿನಾಂಕ: 21.07.2017.

7) ಮಾನ್ಯ ಸಚಿವರ ಅಧ್ಯಕ್ಷತೆಯೊಂದಿಗೆ ದಿನಾಂಕ: 29.07.2017ರಂದು ನಡೆದ ಸಭೆಯ ನಡವಳಿಗಳು

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮಸಂಖ್ಯೆ (1)ರ ಸರ್ಕಾರದ ಆದೇಶದಲ್ಲಿ 2016-17ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ: 204ರಲ್ಲಿ ಘೋಷಿಸಿರುವಂತೆ ಅಲ್ಪಸಂಖ್ಯಾತರ ಕಾಲೋನಿಗಳಲ್ಲಿ ಮೂಲಭೂತ ಸೌಲಭ್ಯವನ್ನು ಒದಗಿಸಲು ಒಟ್ಟು ರೂ.75.00 ಕೋಟಿ ಕಾಮಗಾರಿಗಳಿಗೆ ಅನುಮೋದನೆ ನೀಡಿ ಆದೇಶಿಸಿದೆ.

ಮೇಲೆ ಓದಲಾದ ಕ್ರಮಸಂಖ್ಯೆ (2)ರ ಆಯವ್ಯಯ ಭಾಷಣದ ಕಂಡಿಕೆ: 222ರಲ್ಲಿ ಸನ್ಮಾನ್ಯ ಮುಖ್ಯಮಂತ್ರಿಗಳು ಅಲ್ಪಸಂಖ್ಯಾತರಿಗೆ ಮೂಲಭೂತ ಸೌಲಭ್ಯ ನೀಡುವ ಬಗ್ಗೆ ರೂ.800.00 ಕೋಟಿಗಳ ಕ್ರಿಯಾ ಯೋಜನೆಯನ್ನು ಘೋಷಿಸಿರುತ್ತಾರೆ.

ಮೇಲೆ ಓದಲಾದ ಕ್ರಮಸಂಖ್ಯೆ (3)ರ ಸರ್ಕಾರದ ಆದೇಶದಲ್ಲಿ ಈ ಯೋಜನೆಯನ್ನು ಪ್ರಸಕ್ತ ಸಾಲಿನಲ್ಲಿ ಮುಂದುವರೆಸಲಾಗಿದ್ದು, ಮುಖ್ಯಮಂತ್ರಿಯವರ ಅಭಿವೃದ್ಧಿ ಯೋಜನೆಗೆ 2017-18ನೇ ಸಾಲಿನಲ್ಲಿ ಲೆಕ್ಕಶೀರ್ಷಿಕೆ: 4225-03-277-2-10(386)ರಡಿಯಲ್ಲಿ ರೂ.500.00 ಕೋಟಿ ಅನುದಾನ ಒದಗಿಸಲಾಗಿದೆ ಇದರಲ್ಲಿ ಅಲ್ಪಸಂಖ್ಯಾತರ ಕಾಲೋನಿ ಅಭಿವೃದ್ಧಿಗಾಗಿ ರೂ.400.00 ಕೋಟಿಗಳನ್ನು ಮೀಸಲಿರಿಸಲಾಗಿದೆ.

ಮೇಲೆ ಓದಲಾದ ಕ್ರಮಸಂಖ್ಯೆ (4)ರ ಸರ್ಕಾರದ ಆದೇಶದಲ್ಲಿ ಅಲ್ಪಸಂಖ್ಯಾತರು ಹೆಚ್ಚಾಗಿ ವಾಸಿಸುತ್ತಿರುವ ರಾಜ್ಯದ ಎಲ್ಲಾ ಜಿಲ್ಲಾ ತಾಲ್ಲೂಕು, ಗ್ರಾಮ ಮಟ್ಟದಲ್ಲಿ ನಗರ ವ್ಯಾಪ್ತಿಯಲ್ಲಿನ ನೋಟಿಫೈಡ್ ಮತ್ತು ನಾನ್ ನೋಟಿಫೈಡ್ ಕೊಳಚೆ ಪ್ರದೇಶದಲ್ಲಿ ಮೂಲಸೌಕರ್ಯ ಅಭಿವೃದ್ಧಿ ಕಾಮಗಾರಿಯನ್ನು ಅನುಷ್ಠಾನಗೊಳಿಸಲು ಆದೇಶ ಹೊರಡಿಸಲಾಗಿದೆ.

ಮೇಲೆ ಓದಲಾದ ಕ್ರಮಸಂಖ್ಯೆ(5)ರ ಪ್ರಸ್ತಾವನೆಯಂತೆ, ಮೇಲೆ ಓದಲಾದ ಕ್ರಮಸಂಖ್ಯೆ(6)ರ ಸರ್ಕಾರದ ಆದೇಶದಲ್ಲಿ ನಿರ್ದೇಶನಾಲಯದಲ್ಲಿ ಒಂದು ಪ್ರಾಜೆಕ್ಟ್ ಮಾನಿಟರಿಂಗ್ ಘಟಕವನ್ನು ಸ್ಥಾಪಿಸಲು ಹಾಗೂ ಅಲ್ಪಸಂಖ್ಯಾತರ ಕಾಲೋನಿಗಳಲ್ಲಿ ಕೆಳಕಂಡ ಕಾಮಗಾರಿಗಳನ್ನು ಕೈಗೊಳ್ಳಲು ಆದೇಶ ನೀಡಲಾಗಿದೆ.

1. ರಸ್ತೆ ಮತ್ತು ಚರಂಡಿ/ಒಳಚರಂಡಿ ನಿರ್ವಹಣೆ
2. ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸುವುದು
3. ಅಗತ್ಯವಿದ್ದಲ್ಲಿ ಕೊಳವೆ ಬಾವಿ ಕೊರೆಯುವುದು
4. ಅಗತ್ಯವಿದ್ದಲ್ಲಿ ಸಾಮೂಹಿಕ ಶೌಚಾಲಯಗಳ ನಿರ್ಮಾಣ (ನಿರ್ಮಾಣದ ನಂತರ ನಿರ್ವಹಣೆ ಸ್ಥಳೀಯ ಸಂಸ್ಥೆಗಳ ಸುಪರ್ದಿಗೆ ನೀಡುವುದು)

ಮೇಲೆ ಓದಲಾದ ಕ್ರಮಸಂಖ್ಯೆ(7)ರ ನಡವಳಿಗಳಲ್ಲಿ ಮಾನ್ಯ ಸಚಿವರು ಹಾಗೂ ಸದಸ್ಯರು ಸಮಾಲೋಚಿಸಿ ಈ ಕೆಳಕಂಡ ನಿರ್ಣಯಗಳನ್ನು ತೆಗೆದುಕೊಳ್ಳಲಾಗಿದೆ.

1. ಸರ್ಕಾರದ ಆದೇಶ ಸಂಖ್ಯೆ: ಎಂಡಬ್ಲೂಡಿ 51 ಎಂಡಿಎಸ್ 2017, ದಿನಾಂಕ:01.03.2017ರಲ್ಲಿ ಆದೇಶಿಸಿರುವಂತೆ ರೂ. 50.00 ಕೋಟಿಗಳನ್ನು ಈ ಅನುದಾನದಲ್ಲಿ ನೀಡುವುದು.
2. 2017-18ನೇ ಸಾಲಿನ ಉಳಿಕೆ ರೂ. 750.00 ಕೋಟಿಗಳಲ್ಲಿ ಪ್ರತಿ ವಿಧಾನ ಸಭಾ ಕ್ಷೇತ್ರಕ್ಕೆ ರೂ. 50.00 ಲಕ್ಷ ಅನುದಾನ ಬಿಡುಗಡೆ ಮಾಡುವುದು.
3. ಕೊಳಗೇರಿ ಅಭಿವೃದ್ಧಿ ಮಂಡಳಿಯು ಅಭಿವೃದ್ಧಿ ಪಡಿಸುವ ವಸತಿ ಯೋಜನೆಯ ಅಲ್ಪಸಂಖ್ಯಾತರು ಶೇ: 50%ರಷ್ಟು ನೆಲಸಿರುವ ಪ್ರದೇಶದ ಮೂಲಭೂತ ಸೌಲಭ್ಯಗಳ ಅಭಿವೃದ್ಧಿಗೆ ರೂ. 50.00 ಕೋಟಿ ಅನುದಾನ ಆಯುಕ್ತರು ಕರ್ನಾಟಕ ಕೊಳಗೇರಿ ಅಭಿವೃದ್ದಿ ಮಂಡಳಿ ಇವರಿಗೆ ಒದಗಿಸುವುದು.

ಮೇಲ್ಕಂಡ ಸಭೆಯಲ್ಲಿ ತೆಗೆದುಕೊಂಡ ನಿರ್ಣಯಗಳನ್ನು ಕೂಲಂಕಷವಾಗಿ ಪರಿಶೀಲಿಸಿ ಕೆಳಕಂಡಂತೆ ಆದೇಶಿಸಿದೆ.

**<u>ಸರ್ಕಾರಿ ಆದೇಶ ಸಂಖ್ಯೆ: MWD 192 MDS 2017, ಬೆಂಗಳೂರು,</u>**
**<u>ದಿನಾಂಕ: 19.08.2017</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಅಲ್ಪಸಂಖ್ಯಾತರ ಹೆಚ್ಚಾಗಿ ವಾಸಿಸುವ ಪ್ರದೇಶಗಳಲ್ಲಿ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸುವ ಉದ್ದೇಶಕ್ಕಾಗಿ ದಿನಾಂಕ: 01.03.2017ರ ಸರ್ಕಾರದ ಆದೇಶದಲ್ಲಿ ರೂ.75.00 ಕೋಟಿಗಳ ಕಾಮಗಾರಿಗಳಿಗೆ ಅನುಮೋದನೆ ನೀಡಲಾಗಿದ್ದು, ಇದರಲ್ಲಿ ಈಗಾಗಲೇ ಬಿಡುಗಡೆ ಮಾಡಿರುವ ರೂ.25.00 ಕೋಟಿಗಳನ್ನು ಹೊರತುಪಡಿಸಿ ಉಳಿದ ರೂ.50.00 ಕೋಟಿಗಳನ್ನು ಬಿಡುಗಡೆ ಮಾಡಲು ಆದೇಶಿಸಿದೆ.

D/TAS/MWD/Sui/D.M